# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 221(208) |
| ಸದಸ್ಯರ ಹೆಸರು | : | ಶ್ರೀ ಯು.ಬಿ.ವೆಂಕಟೇಶ್ (ನಾಮನಿರ್ದೇಶನ ಹೊಂದಿದವರು) |
| ಉತ್ತರಿಸಬೇಕಾದ ದಿನಾಂಕ | : | 06.07.2023 |
| ಉತ್ತರಿಸುವ ಸಚಿವರು | : | ಗೃಹ ಸಚಿವರು |

| ಕ್ರ ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ಬೆಂಗಳೂರು ನಗರದಲ್ಲಿ ವಾಹನ ಸಂಚಾರ ನಿಯಮ ಉಲ್ಲಂಘನೆ ಪ್ರಕರಣಗಳು ದಿನೇದಿನೇ ಹೆಚ್ಚಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬಂದಿರುತ್ತದೆ |
| (ಆ) | ಹಾಗಿದ್ದಲ್ಲಿ, ಸಂಚಾರ ನಿಯಮ ಉಲ್ಲಂಘನೆಗಳಿಗೆ ಕಡಿವಾಣ ಹಾಕಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು; | ➢ ಸಂಚಾರ ನಿಯಮ ಉಲ್ಲಂಘನೆಗಳಿಗೆ ಕಡಿವಾಣ ಹಾಕುವ ದೃಷ್ಟಿಯಿಂದ ಬೆಂಗಳೂರು ನಗರದಲ್ಲಿ **ಸಂಪರ್ಕ ಸಹಿತ(ಭೌತಿಕವಾಗಿ ವಾಹನಗಳನ್ನು ತಡೆದು) ಮತ್ತು ಸಂಪರ್ಕ ರಹಿತ(ಭೌತಿಕವಾಗಿ ವಾಹನಗಳ ತಡೆಯದೆ)** ನಿಯಮ ಜಾರಿಯಡಿಯಲ್ಲಿ ನಿಯಮ ಉಲ್ಲಂಘನಾ ಪ್ರಕರಣಗಳನ್ನು ದಾಖಲು ಮಾಡಲು ಕ್ರಮ ಕೈಗೊಂಡಿರುತ್ತದೆ.<br>➢ ಸಂಪರ್ಕ ಸಹಿತ ನಿಯಮ ಜಾರಿಯಡಿಯಲ್ಲಿ ಎ.ಎಸ್.ಐ ಮತ್ತು ಅದಕ್ಕಿಂತ ಮೇಲ್ಪಟ್ಟ ದರ್ಜೆಯ ಅಧಿಕಾರಿಗಳಿಗೆ ಪಿ.ಡಿ.ಎ(ಪರ್ಸನಲ್ ಡಿಜಿಟಲ್ ಅಸಿಸ್ಟೆಂಟ್) ಉಪಕರಣವನ್ನು ನೀಡಿದ್ದು, ನಾನ್ ಪೀಕ್ ಹವರ್ಸ್ ವೇಳೆಯಲ್ಲಿ ಕಣ್ಣಿಗೆ ಗೋಚರಿಸುವ ನಿಯಮ ಉಲ್ಲಂಘನೆಗಳನ್ನು ಮಾತ್ರ ಗುರ್ತಿಸಿ ಪ್ರಕರಣಗಳನ್ನು ದಾಖಲಿಸಲಾಗುತ್ತಿರುತ್ತದೆ.<br>➢ ಸಂಪರ್ಕ ರಹಿತ ನಿಯಮ ಜಾರಿಯಡಿಯಲ್ಲಿ ಜಂಕ್ಷನ್‌ಗಳಲ್ಲಿ ಕರ್ತವ್ಯ ನಿರ್ವಹಿಸುವ ಸಿಬ್ಬಂದಿಗಳಿಗ ಡಿಜಿ ಟ್ಯಾಬ್ (ಡಿಜಿಟಲ್ ಟ್ಯಾಬ್) ಗಳನ್ನು ವಿತರಿಸಲಾಗಿದ್ದು, ಡಿಜಿಟಲ್ ಟ್ಯಾಬ್‌ಗಳ ಮುಖಾಂತರ ನಿಯಮ ಉಲ್ಲಂಘನೆಗಳನ್ನು ಸಾಕ್ಷ್ಯ ಸಮೇತ ದಾಖಲಿಸಿ, ನಿಯಮ ಉಲ್ಲಂಘನಾ ನೋಟೀಸ್‌ಗಳನ್ನು ನಿಯಮ ಉಲ್ಲಂಘನೆದಾರರ ವಿಳಾಸಕ್ಕೆ ಕಳುಹಿಸುವ ವ್ಯವಸ್ಥೆಯನ್ನು ಮಾಡಲಾಗಿರುತ್ತದೆ. ಡಿಜಿ ಟ್ಯಾಬ್(ಡಿಜಿಟಲ್ ಟ್ಯಾಬ್) ಮುಖಾಂತರ ಮಾಸಿಕವಾರು ಸರಾಸರಿ 2,34,000 ನಿಯಮ ಉಲ್ಲಂಘನಾ ಪ್ರಕರಣಗಳನ್ನು ದಾಖಲಿಸಲಾಗುತ್ತಿರುತ್ತದೆ.<br>➢ ಬೆಂಗಳೂರು ನಗರ ಸಂಚಾರ ಪೊಲೀಸ್ ಘಟಕವು ತಂತ್ರಜ್ಞಾನದ ಬಳಕೆ ಹಾಗೂ ಸಂಯೋಜನೆಗಳನ್ನು ಪೊಲೀಸ್ ಕಾರ್ಯಚಟುವಟಿಕೆಗಳಲ್ಲಿ ಅಳವಡಿಸಿಕೊಳ್ಳುವ ಹಲವಾರು ಉಪ ಕ್ರಮಗಳನ್ನು ಕೈಗೊಂಡಿದ್ದು, ಅಂತಹ ಹಲವು ತಂತ್ರಜ್ಞಾನಗಳಲ್ಲಿ **ಐ.ಟಿ.ಎಂ.ಎಸ್ (ಇಂಟೆಲಿಜೆಂಟ್ ಟ್ರಾಫಿಕ್ ಮ್ಯಾನೇಜ್‌ಮೆಂಟ್ ಸಿಸ್ಟಂ)** |

| | | |
|---|---|---|
| | | ಕೂಡ ಒಂದಾಗಿರುತ್ತದೆ. ಈ ವ್ಯವಸ್ಥೆಯನ್ನು ಡಿಸೆಂಬರ್-2022 ರಿಂದ ನಗರದ ಪ್ರಮುಖ 50 ಜಂಕ್ಷನ್‌ಗಳಲ್ಲಿ ಜಾರಿಗೆ ತರಲಾಗಿದ್ದು, ಒಟ್ಟು 250 ಎ.ಎನ್.ಪಿ.ಆರ್.(ಆಟೋಮೇಟೆಡ್ ನಂಬರ್ ಪ್ಲೇಟ್ ರೆಕಗ್ನಿಷನ್) ಹಾಗೂ 90 ಆರ್.ಎಲ್.ವಿ.ಡಿ(ರೆಡ್ ಲೈಟ್ ವಯೋಲೇಶನ್ ಡಿಟೆಕ್ಷನ್) ಕ್ಯಾಮೆರಾಗಳನ್ನು ಅಳವಡಿಸಲಾಗಿರುತ್ತದೆ. ಈ ವ್ಯವಸ್ಥೆಯು ಸಂಪರ್ಕರಹಿತ ಸ್ವಯಂಚಾಲಿತ ಸಂಚಾರ ಉಲ್ಲಂಘನೆ ಜಾರಿಗಾಗಿ ಇರುವ ಉತ್ತಮ ವ್ಯವಸ್ಥೆಯಾಗಿರುತ್ತದೆ. ಈ ವ್ಯವಸ್ಥೆಯ ಮುಖಾಂತರ ಮಾಸಿಕವಾರು ಸರಾಸರಿ 4,50,000 ನಿಯಮ ಉಲ್ಲಂಘನಾ ಪ್ರಕರಣಗಳನ್ನು ದಾಖಲಿಸಲಾಗುತ್ತಿರುತ್ತದೆ.<br>➤ ಸಂಚಾರ ನಿಯಮ ಉಲ್ಲಂಘನಾ ಪ್ರಕರಣಗಳ ಬಗ್ಗೆ ಸಾರ್ವಜನಿಕರೂ ಸಹ ದೂರು ನೀಡುವ ಸಲುವಾಗಿ ಪಬ್ಲಿಕ್ ಐ ಎಂಬ ಆ್ಯಪ್ ಮೂಲಕ ಮಾಹಿತಿಯನ್ನು ರವಾನಿಸಬಹುದಾಗಿದ್ದು, ಅಂತಹ ದೂರುಗಳನ್ನು ಸ್ವೀಕರಿಸಿದ ನಂತರ ಪರಿಶೀಲಿಸಿ ನಿಯಮ ಉಲ್ಲಂಘನಾ ನೋಟೀಸ್‌ಗಳನ್ನು ಉಲ್ಲಂಘನೆದಾರರಿಗೆ ಕಳುಹಿಸಲು ಕ್ರಮ ಕೈಗೊಂಡಿರುತ್ತದೆ. |
| (ಇ) | ವಾಹನ ಸವಾರರ ಸುರಕ್ಷತೆ ಹಾಗೂ ಸಂಚಾರ ನಿಯಮಗಳ ಪಾಲನೆ ಕುರಿತು ಜಾಗೃತಿ ಕಾರ್ಯಕ್ರಮಗಳನ್ನು ರೂಪಿಸಲಾಗಿದೆಯೇ? | ➤ ಬೆಂಗಳೂರು ನಗರದಲ್ಲಿ ವಾಹನ ಸವಾರರ ಸುರಕ್ಷತೆ ಹಾಗೂ ಸಂಚಾರ ನಿಯಮ ಪಾಲನೆ ಕುರಿತು ಸಂಚಾರ ನಿಯಮಗಳ ಅರಿವು ಮೂಡಿಸುವ ಕಾರ್ಯಕ್ರಮಗಳನ್ನು ನಿರಂತರವಾಗಿ ಆಯೋಜಿಸಲಾಗುತ್ತಿರುತ್ತದೆ.<br>➤ ಸಾಮಾಜಿಕ ಜಾಲತಾಣಗಳಾದ ಫೇಸ್‌ಬುಕ್, ಟ್ವಿಟರ್, ಯೂಟ್ಯೂಬ್ ಹಾಗೂ ಇನ್‌ಸ್ಟಾಗ್ರಾಮ್ ಗಳ ಮೂಲಕ ಸಂಚಾರ ನಿಯಮಗಳ ಪಾಲನೆಯ ಮಹತ್ವಗಳ ಬಗ್ಗೆ ಸಂದೇಶಗಳನ್ನು ರವಾನಿಸುವ ಹಾಗೂ ನಿಯಮ ಪಾಲನೆಯ ಬಗ್ಗೆ ಪೋಸ್ಟರ್‌ಗಳನ್ನು ಅಪ್‌ಲೋಡ್ ಮಾಡಲು ಕ್ರಮ ಕೈಗೊಂಡಿರುತ್ತದೆ.<br>➤ ನಗರದ 48 ಸಂಚಾರ ಪೊಲೀಸ್ ಠಾಣೆಗಳಲ್ಲಿಯೂ ಸಹ ಸಾಮಾಜಿಕ ಜಾಲತಾಣಗಳ ಪ್ರತ್ಯೇಕ ಐ.ಡಿಯನ್ನು ಸೃಜಿಸಲಾಗಿದ್ದು, ರಸ್ತೆ ನಿಯಮಗಳ ಪಾಲನೆಯ ಮಹತ್ವದ ಅರಿವು ಮೂಡಿಸುವ ಕಾರ್ಯವನ್ನು ನಿರಂತರವಾಗಿ ಕೈಗೊಳ್ಳಲಾಗುತ್ತಿರುತ್ತದೆ.<br>➤ ಮಾರಣಾಂತಿಕ ಅಪಘಾತಗಳು ಉಂಟಾಗಲು ಪ್ರಮುಖವಾಗಿ ಕಾರಣವಾಗುವ ನಿಯಮ ಉಲ್ಲಂಘನೆಗಳಾದ ಮದ್ಯಪಾನ ಮಾಡಿ ವಾಹನ ಚಾಲನೆ ಹಾಗೂ ಹೆಲ್ಮೆಟ್ ರಹಿತ ವಾಹನ ಚಾಲನೆಯ ಬಗ್ಗೆ ವಿಶೇಷವಾದ ಅಭಿಯಾನ ಕಾರ್ಯಕ್ರಮಗಳನ್ನು ಆಯೋಜಿಸುವ ಮೂಲಕ ಅರಿವು ಮೂಡಿಸುವ ಕಾರ್ಯಕ್ರಮಗಳನ್ನು ಆಯೋಜಿಸಲಾಗಿರುತ್ತದೆ ಹಾಗೂ ಭಿತ್ತಿ ಪತ್ರಗಳನ್ನು ಹೊರಡಿಸಿ ಅರಿವು ಮೂಡಿಸುವ ಕಾರ್ಯವನ್ನು ಕೈಗೊಂಡಿರುತ್ತದೆ **(ಅನುಬಂಧದಲ್ಲಿ ಒದಗಿಸಿದೆ).**<br>➤ ಪ್ರತಿ ಠಾಣಾ ವ್ಯಾಪ್ತಿಯಲ್ಲಿರುವ ಶಾಲೆಗಳಿಗೆ ಎಸ್.ಎ.ಆರ್.ಎಸ್ (ಸ್ಟೂಡೆಂಟ್ ಅಸೋಸಿಯೇಶನ್ ಫಾರ್ ರೋಡ್ ಸೇಫ್ಟಿ) |

| | | |
|---|---|---|
| | | ಯೋಜನೆಯಡಿಯಲ್ಲಿ ಖಿದ್ದು ಶಾಲೆಗಳಿಗೆ ಭೇಟಿ ಕೊಟ್ಟು ರಸ್ತೆ ನಿಯಮಗಳ ಪಾಲನೆ ಹಾಗೂ ಅವುಗಳ ಮಹತ್ವದ ಬಗ್ಗೆ ಅರಿವು ಮೂಡಿಸಲು ಅಗತ್ಯ ಅಧಿಕಾರಿ ಹಾಗೂ ಸಿಬ್ಬಂದಿಗಳ ನೇಮಕ ಮಾಡಿ ತರಬೇತಿಯನ್ನು ನೀಡಲಾಗುತ್ತಿರುತ್ತದೆ.<br>➢ ಸೆಂಟ್‌ಮಾರ್ಕ್ಸ್ ರಸ್ತೆಯಲ್ಲಿರುವ ಟ್ರಾಫಿಕ್ ಪಾರ್ಕ್‌ನಲ್ಲಿ ವಿವಿಧ ಬಗೆಯ ವಾಹನಗಳ ಚಾಲಕರು ಹಾಗೂ ಶಾಲಾ ಮಕ್ಕಳಿಗೆ ರಸ್ತೆ ನಿಯಮಗಳ ಬಗ್ಗೆ ಅರಿವು ಮೂಡಿಸಲು ಮಾಸಿಕವಾರು ತರಬೇತಿಯನ್ನು ಆಯೋಜಿಸಲಾಗುತ್ತಿರುತ್ತದೆ.<br>➢ ಪ್ರತಿ ಠಾಣಾ ಮಟ್ಟದಲ್ಲೂ ಸಾಮಾಜಿಕ ಜಾಲತಾಣ ಮಾಧ್ಯಮಗಳ ಮೂಲಕ ರಸ್ತೆ ನಿಯಮಗಳ ಪಾಲನೆಯ ಮಹತ್ವದ ಅರಿವು ಮೂಡಿಸುವ ಕಾರ್ಯವನ್ನು ಕೈಗೊಂಡಿರುತ್ತದೆ.<br>➢ ಥಣಿಸಂದ್ರದಲ್ಲಿರುವ ಸಂಚಾರ ತರಬೇತಿ ಮತ್ತು ರಸ್ತೆ ಸುರಕ್ಷತಾ ಸಂಸ್ಥೆಯಲ್ಲಿ, ಕ್ಯಾಬ್‌ಚಾಲಕರು, ಬಿ.ಎಂ.ಟಿ.ಸಿ ಹಾಗೂ ಕೆ.ಎಸ್.ಆರ್.ಟಿ.ಸಿ. ವಾಹನ ಚಾಲಕರು, ಆಟೋಡ್ರೈವರ್ಸ್‌ಗಳು, ಐ.ಟಿ. ಕಂಪನಿಯ ನೌಕರರು, ಹೋಂ ಗಾರ್ಡ್ಸ್‌ಗಳು ಹಾಗೂ ಪೊಲೀಸ್ ಸಿಬ್ಬಂದಿಗಳಿಗೆ ತರಬೇತಿಯನ್ನು ಆಯೋಜಿಸುವ ಮೂಲಕ ರಸ್ತೆ ನಿಯಮಗಳ ಪಾಲನೆಯ ಮಹತ್ವದ ಬಗ್ಗೆ ಅರಿವು ಮೂಡಿಸಲಾಗುತ್ತಿರುತ್ತದೆ. ಕಳೆದ ಮೂರು ವರ್ಷಗಳಲ್ಲಿ ರಸ್ತೆ ನಿಯಮಗಳ ಪಾಲನೆಯ ಬಗ್ಗೆ ತರಬೇತಿ ನೀಡಿರುವ ವಿವರ ಈ ಕೆಳಕಂಡಂತಿರುತ್ತದೆ.<br><table><tr><th>ವರ್ಷ</th><th>ತರಬೇತಿ ಪಡೆದವರ ಸಂಖ್ಯೆ</th></tr><tr><td>2020</td><td>6332</td></tr><tr><td>2021</td><td>5297</td></tr><tr><td>2022</td><td>24502</td></tr><tr><td>2023</td><td>11711</td></tr></table><br>ರಸ್ತೆಗಳಲ್ಲಿ ಸಂಭವಿಸುವ ಮಾರಣಾಂತಿಕ ಅಪಘಾತಗಳನ್ನು ತಡೆಗಟ್ಟುವ ನಿಟ್ಟಿನಲ್ಲಿ ಸಂಚಾರ ನಿಯಮಗಳ ಪಾಲನೆಯು ತುಂಬಾ ಮಹತ್ವದ್ದಾಗಿದ್ದು, ಈ ಬಗ್ಗೆ ಶಾಲಾ ಮಕ್ಕಳಲ್ಲಿ ಮತ್ತು ಸಾರ್ವಜನಿಕರಿಗೆ ಹೆಚ್ಚಿನ ಅರಿವು ಮೂಡಿಸಲು ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುತ್ತಿದೆ. |

ಹೆಚ್‌ಡಿ 313 ಎಸ್‌ಎಸ್‌ಟಿ 2023

(ಡಾ: ಜಿ.ಪರಮೇಶ್ವರ)
ಗೃಹ ಸಚಿವರು